# ನಗರಸಭಾ ಕಾರ್ಯಾಲಯ, ದೊಡ್ಡಬಳ್ಳಾಪುರ

ನಸದೊ/ತಾಂತ್ರಿಕ ವಿಭಾಗ/ಸಿ.ಆರ್.3/2006-07 ದಿನಾಂಕ:05-09-2006

**-:: ಟೆಂಡರ್ ಪ್ರಕಟಣೆ ::-**

ದೊಡ್ಡಬಳ್ಳಾಪುರ ನಗರಸಭಾ ವ್ಯಾಪ್ತಿಯಲ್ಲಿ ಎಸ್.ಎಫ್.ಸಿ. ಅನುಧಾನದಡಿ ನಗರದಲ್ಲಿ ಹೊಸದಾಗಿ ಹೈಮಾಸ್ಟ್ ವಿದ್ಯುತ್ ದೀಪಗಳನ್ನು ಅಳವಡಿಸುವ ಕಾಮಗಾರಿಗಳಿಗೆ ಅರ್ಹ ಗುತ್ತಿಗೆದಾರರಿಂದ ದ್ವಿಪ್ರತಿಯಲ್ಲಿ ಐಟಂವಾರು ಟೆಂಡರ್‌ಗಳನ್ನು ಆಹ್ವಾನಿಸಿದೆ. ಇಚ್ಚೆಯುಳ್ಳವರು ತಮ್ಮ ಕನಿಷ್ಠ ದರ ನಮೂದಿಸಿದ ಟೆಂಡರ್ ಐಟಂವಾರು ದರಗಳನ್ನು, ಲಕೋಟೆಯ ಮೇಲೆ ಕಾಮಗಾರಿ ಹೆಸರನ್ನು ನಮೂದಿಸಿದ ಜೊತೆಗೆ ನಿಗಧಿಪಡಿಸಿರುವ ಇ.ಎಂ.ಡಿ. ಹಣವನ್ನು ಡಿ.ಡಿ ಅಥವಾ ಕಛೇರಿಯಲ್ಲಿ ಪಾವತಿ ಮಾಡಿದ ನಗದು ರಶೀದಿಯೊಂದಿಗೆ ಸೀಲ್ ಮಾಡಿ ಲಕೋಟೆಯಲ್ಲಿಟ್ಟು, ಪೌರಾಯುಕ್ತರು, ನಗರಸಭೆ, ದೊಡ್ಡಬಳ್ಳಾಪುರ ರವರಿಗೆ ದಿನಾಂಕ:30-09-2006ರಂದು ಸಂಜೆ 4.00ಗಂಟೆಯೊಳಗಾಗಿ ತಲುಪುವಂತೆ ಕಳುಹಿಸಲು ಸೂಚಿಸಿದೆ. ಹಾಗೂ ಷರತ್ತುಗಳು ಕಛೇರಿಯ ನಾಮಫಲಕದಲ್ಲಿ ಮತ್ತು ಜಿಲ್ಲಾ ಟೆಂಡರ್ ಬ್ಯುಲೆಟಿನ್‌ನಲ್ಲಿ ಪ್ರಕಟಿಸಿರುವಂತೆ ಹೆಚ್ಚಿನ ಮಾಹಿತಿಗಳನ್ನು ಕಛೇರಿಯ ವೇಳೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆಯಬಹುದು.

1) ಟೆಂಡರ್ ಫಾರಂಗೆ ಅರ್ಜಿ ಸಲ್ಲಿಸುವ ದಿನಾಂಕ: 11-09-2006

2) ಖಾಲಿ ಟೆಂಡರ್ ಫಾರಂ ನೀಡುವ ದಿನಾಂಕ: 16-09-2006

3) ಭರ್ತಿ ಮಾಡಿದ ಟೆಂಡರ್ ಫಾರಂ ಸ್ವೀಕರಿಸುವ ದಿನಾಂಕ:30-09-2006ರಂದು ಸಂಜೆ 4.00ಗಂಟೆಗೆ, ಸಾಧ್ಯವಾದಲ್ಲಿ ಟೆಂಡರ್‌ಗಳನ್ನು ಅಂದೇ ಹಾಜರಿರುವ ಗುತ್ತಿಗೆದಾರರ ಸಮ್ಮುಖದಲ್ಲಿ ತೆರೆಯಲಾಗುವುದು.

4) ಟೆಂಡರ್ ಫಾರಂ ಶುಲ್ಕ ರೂ.500/-

| ಕ್ರ. ಸಂ. | ಕಾಮಗಾರಿ ಹೆಸರು | ಇ.ಎಂ.ಡಿ. ಹಣ | ಕಾಲಾವಧಿ |
|---|---|---|---|
| 1 | ಮುಗುವಾಳಪ್ಪ ಸರ್ಕಲ್ ಹತ್ತಿರ ಹೊಸದಾಗಿ ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಸುವ ಕಾಮಗಾರಿ | 10,000 | 2ತಿಂಗಳು |
| 2 | ವಿಶ್ವೇಶ್ವರಯ್ಯ ಸರ್ಕಲ್ ಹತ್ತಿರ ಹೊಸದಾಗಿ ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಸುವ ಕಾಮಗಾರಿ | 10,000 | 2ತಿಂಗಳು |
| 3 | ಶ್ರೀ ಕೊಂಗಾಡಿಯಪ್ಪ ಕಾಲೇಜ್ ಮುಂಭಾಗ ಹೊಸದಾಗಿ ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಸುವ ಕಾಮಗಾರಿ | 10,000 | 2ತಿಂಗಳು |
| 4 | ರೈಲ್ವೆ ಸ್ಟೇಷನ್ ಸರ್ಕಲ್ ಹತ್ತಿರ ಹಾಲಿ ಇರುವ ಮಿನಿ ಹೈಮಾಸ್ಟ್ ವಿದ್ಯುತ್ ದೀಪ ತೆಗೆದು | 10,000 | 2ತಿಂಗಳು |

| | | | |
|---|---|---|---|
| | ಹೊಸದಾಗಿ ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಸುವ ಕಾಮಗಾರಿ | | |

**<u>ಷರತ್ತುಗಳು ಮೇಲಿನ ಕಾಮಗಾರಿಗಳಿಗೆ ಅನ್ವಯಿಸುವಂತೆ:</u>**

1) ಟೆಂಡರ್‌ದಾರರು ದರ್ಜೆ-1ರಲ್ಲಿ ನೋಂದಾಯಿಸಲ್ಪಟ್ಟ ವಿದ್ಯುತ್ ಗುತ್ತಿಗೆದಾರರಾಗಿರಬೇಕು,
2) ಟೆಂಡರ್‌ದಾರರು ವರಮಾನ ತೆರಿಗೆ ಪಾವತಿಸುವವರಾಗಿರಬೇಕು, ಹಾಗೂ ಇತ್ತೀಚಿನ ವರಮಾನ ತೆರಿಗೆ ಪಾವತಿಸಿರುವ ಬಗ್ಗೆ ದಾಖಲಾತಿ ಲಗತ್ತಿಸಬೇಕು,
3) ಟೆಂಡರ್‌ದಾರರು 2005-06ನೇ ಸಾಲಿನಲ್ಲಿ ಕನಿಷ್ಟ 25ಲಕ್ಷ ರೂ.ಗಳ ವಿದ್ಯುತ್‌ಗೆ ಸಂಬಂಧಿಸಿದ ಕೆಲಸಗಳನ್ನು ವಿವಿಧ ಇಲಾಖೆಗಳಲ್ಲಿ ಸಮರ್ಪಕವಾಗಿ ನಿರ್ವಹಿಸರಬೇಕು, ಈ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಂದ ದೃಢೀಕರಣ ಪತ್ರ ಪಡೆದು ಲಗತ್ತಿಸಬೇಕು.

4) ಮಂಜೂರಾದ ಟೆಂಡರ್ ದಾರರು ಈ ಕಛೇರಿಯ ಕಾರ್ಯಾದೇಶ ನೀಡಿದ ಎರಡು ತಿಂಗಳೊಳಗಾಗಿ ನಗರಸಭಾ ವ್ಯಾಪ್ತಿಯಲ್ಲಿ ಸೂಚಿಸುವ ಸ್ಥಳಗಳಲ್ಲಿ ಹೈಮಾಸ್ಟ್ ಲೈಟ್ ಗಳನ್ನು ಅಳವಡಿಸಿ, ಕೆ.ಪಿ.ಟಿ.ಸಿ.ಎಲ್. ನಿಂದ ವಿದ್ಯುತ್ ಸಂಪರ್ಕ ಪಡೆದು, ಸಮರ್ಪಕವಾಗಿ ಕೆಲಸ ನಿರ್ವಹಿಸಿರುವ ಬಗ್ಗೆ, ಸಂಬಂಪಟ್ಟ ಕೆ.ಪಿ.ಟಿ.ಸಿ.ಎಲ್.ನ ಅಧಿಕಾರಿಗಳಿಂದ ದೃಡೀಕರಣ ಪತ್ರ ಪಡೆದು ಈ ಕಛೇರಿಗೆ ಸಲ್ಲಿಸುವುದು, ನಂತರ ಬಿಲ್ಲಿನ ಹಣಪಾವತಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

5) ಟೆಂಡರ್ ಸಲ್ಲಿಸುವವರು ದಾಖಲಾತಿಗಳ ಜೆರಾಕ್ಸ್ ಪ್ರತಿಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಡೀಕರಿಸಿ ಸಲ್ಲಿಸಬೇಕು,

6) ಇ.ಎಂ.ಡಿ. ಹಣವನ್ನು ಡಿ.ಡಿ.ಅಥವಾ ಕಛೇರಿಯಲ್ಲಿ ನಗದು ಪಾವತಿಸಿದ ರಸೀದಿಯೊಂದಿಗೆ ಪೌರಾಯುಕ್ತರು, ನಗರಸಭೆ, ದೊಡ್ಡಬಳ್ಳಾಪುರ ರವರ ಹೆಸರಿಗೆ ಟೆಂಡರ್‌ನೊಂದಿಗೆ ಸಲ್ಲಿಸಬೇಕು, ಇ.ಎಂ.ಡಿ. ಇಲ್ಲದ ಟೆಂಡರ್‌ಗಳನ್ನು ತಿರಸ್ಕರಿಸಲಾಗುವುದು, ಹಾಗೂ ಖಾಲಿ ಟೆಂಡರ್ ಫಾರಂಗೆ ಕಟ್ಟಿದ ಬೆಲೆಯನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

7) ಟೆಂಡರ್ ಲಕೋಟೆಯ ಮೇಲೆ ಕಾಮಗಾರಿ ಹೆಸರು ಮತ್ತು ಕ್ರಮ ಸಂಖ್ಯೆಯನ್ನು ನಮೂದಿಸಿರಬೇಕು.

8) ಟೆಂಡರ್‌ಗೆ ಸಂಬಂಧಪಟ್ಟ ಹೆಚ್ಚಿನ ವಿವರಗಳಿಗೆ ಕಛೇರಿಯ ವೇಳೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸುವುದು, ಯಾವುದೇ ಕಾರಣ ನೀಡದೆ ದರಪಟ್ಟಿಯನ್ನು ತಿರಸ್ಕರಿಸುವ ಅಥವಾ ಯಾವುದೇ ಕ್ಷಣದಲ್ಲಾದರೂ ರದ್ದು ಪಡಿಸುವ ಅಥವಾ ಟೆಂಡರ್‌ಗೆ ಸಂಬಂಧಪಟ್ಟ ಎಲ್ಲಾ ರೀತಿಯ ಹಕ್ಕುಗಳನ್ನು ಈ ಕೆಳಗೆ ಸಹಿ ಮಾಡಿರುವ ಅಧಿಕಾರಿಗಳು ಕಾಯ್ದಿರಿಸಿಕೊಂಡಿರುತ್ತಾರೆ.

ಸಹಿ:–
(ಶಾಂತಮ್ಮ)
ಅಧ್ಯಕ್ಷರು,
ನಗರಸಭೆ, ದೊಡ್ಡಬಳ್ಳಾಪುರ.

ಸಹಿ:–
(ವಿ.ರಾಜಪ್ಪ)
ಉಪಾಧ್ಯಕ್ಷರು,
ನಗರಸಭೆ, ದೊಡ್ಡಬಳ್ಳಾಪುರ.

ಸಹಿ:–
(ಸು.ನರಸಿಂಹಮೂರ್ತಿ)
ಸ್ಥಾ.ಸ.ಅಧ್ಯಕ್ಷರು,
ನಗರಸಭೆ, ದೊಡ್ಡಬಳ್ಳಾಪುರ.

ಸಹಿ:–
(ಚಿಕ್ಕಣ್ಣ)
ಪೌರಾಯುಕ್ತರು,
ನಗರಸಭೆ, ದೊಡ್ಡಬಳ್ಳಾಪುರ.

**“ ನಕಲು ಪ್ರತಿ ”**

**ಪೌರಾಯುಕ್ತರು,**
**ನಗರಸಭೆ, ದೊಡ್ಡಬಳ್ಳಾಪುರ.**